**ಕರ್ನಾಟಕ ಸರ್ಕಾರ**
**ಸಮಾಜ ಕಲ್ಯಾಣ ಇಲಾಖೆ**
ಆಯುಕ್ತರ ಕಛೇರಿ, ಆಯುಕ್ತರ ಕಛೇರಿ,
ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು.-560 001.

**ಭಾರತೀಯ ಸೇನೆ/ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ 2022-23ನೇ ಸಾಲಿನಲ್ಲಿ ಉಚಿತವಾಗಿ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿ ನೀಡುತ್ತಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ/ಅವರ ಪೋಷಕರಿಗೆ ಸೂಚನೆಗಳು.**

**ಸಂ: ಸಂ:ಸಕನಿ/ಪಪೂತಕೇ/S-4/CR- 01/2022-23** **ದಿನಾಂಕ:30.07.2022**

**ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ ಅರ್ಹತೆಗಳು ಹಾಗೂ ತರಬೇತಿಯ ನಿಬಂಧನೆಗಳು:**

1. ಅರ್ಹ ಆಸಕ್ತ ಅಭ್ಯರ್ಥಿಗಳು ಇಲಾಖಾ ವೆಬ್-ಸೈಟ್ **https://sw.kar.nic.in** ನಲ್ಲಿ ಪ್ರಕಟಿಸಿರುವ ಅರ್ಜಿ ನಮೂನೆಯನ್ನು ಡೌನ್-ಲೋಡ್ ಮಾಡಿಕೊಂಡು ನಿಗದಿತ ನಮೂನೆಯಲ್ಲಿಯೇ ಅರ್ಜಿಯನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸ ಬೇಕು. ನಿಗದಿತ ನಮೂನೆಯಲ್ಲಿ ಇಲ್ಲದ ಅರ್ಜಿಗಳನ್ನು ಹಾಗೂ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ಪರಿಶಿಷ್ಟ ಜಾತಿಗೆ ಸೇರಿರಬೇಕು.
3. **ತರಬೇತಿಯನ್ನು ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಾತ್ರ ನೀಡಲಾಗುವುದು.**
4. ಅಭ್ಯರ್ಥಿಯ ಕುಟುಂಬದ ಒಟ್ಟು ವಾರ್ಷಿಕ ಆದಾಯ ರೂ.5.00 ಲಕ್ಷದೊಳಗಿರಬೇಕು.
5. ಅಭ್ಯರ್ಥಿಯು 10ನೇ ತರಗತಿಯಲ್ಲಿ ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಮೇಲ್ಕಂಡಂತೆ ಸಮಾನವಾದ ಗ್ರೇಡ್ ಪಡೆದಿರಬೇಕು.

6. ಈ ಇಲಾಖೆಯಿಂದ ನೀಡುವ ಸದರಿ ತರಬೇತಿಯನ್ನು ಅಭ್ಯರ್ಥಿಗಳು ಒಂದು ಬಾರಿ ಮಾತ್ರ ಪಡೆಯಲು ಅರ್ಹರು.

7. ಅಭ್ಯರ್ಥಿಗಳನ್ನು 10 ನೇ ತರಗತಿಯಲ್ಲಿ ಪಡೆದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

8. ಅಭ್ಯರ್ಥಿಗಳು ಮೇಲ್ಕಂಡಂತೆ **ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ** ಜಿಲ್ಲೆಗಳಲ್ಲಿ ಯಾವುದಾದರೂ ಒಂದು ಜಿಲ್ಲೆಯನ್ನು ಮಾತ್ರ ತರಬೇತಿಗಾಗಿ ಆಯ್ಕೆ ಮಾಡಿಕೊಳ್ಳಬೇಕು ಉಪ ಉಪ ನಿರ್ದೇಶಕರು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿಗೆ ತಮ್ಮ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ **ದಿನಾಂಕ: 15.08.2022** ರೊಳಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಬಹುದು. ನೋಂದಾಯಿತ ಅಂಚೆ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ತಮ್ಮ ಅರ್ಜಿಯು, ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಉಪ ನಿರ್ದೇರ್ಶಕರು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿಗೆ ತಲುಪುವಂತೆ ಮುಂಚಿತವಾಗಿಯೇ ರವಾನಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ **ದಿನಾಂಕ:15.08.2022** ರ ನಂತರ ಸಲ್ಲಿಕೆಯಾಗುವ ಯಾವುದೇ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಉಪ ನಿರ್ದೇಶಕರು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿಗಳ ವಿಳಾಸ ಈ ಕೆಳಗಿನಂತಿದೆ.

| **ಕ್ರ. ಸಂ.** | **ತರಬೇತಿ ನೀಡುವ ಜಿಲ್ಲೆ** | **ಉಪ ನಿರ್ದೇರ್ಶಕರು, ಸಮಾಜ ಕಲ್ಯಾಣಾಧಿಕಾರಿಗಳ ಕಛೇರಿಗಳ ಅಂಚೆ ವಿಳಾಸ** |
|---|---|---|
| ಅ) | **ದಕ್ಷಿಣಕನ್ನಡಜಿಲ್ಲೆ** | ಉಪ ನಿರ್ದೇಶಕರು<br>ಸಮಾಜ ಕಲ್ಯಾಣ ಇಲಾಖೆ<br>ದಕ್ಷಿಣ ಕನ್ನಡ ಜಿಲ್ಲೆ<br>ಮೊಬೈಲ್ ಸಂಖ್ಯೆ : +91 9480843030<br>ಕಛೇರಿ ದೂರವಾಣಿ: 0824 2451237<br>ಇ-ಮೇಲ್:**dswomng@gmail.com** |
| ಆ) | **ಉಡುಪಿ ಜಿಲ್ಲೆ** | ಉಪ ನಿರ್ದೇಶಕರು<br>ಸಮಾಜ ಕಲ್ಯಾಣ ಇಲಾಖೆ<br>ಉಡುಪಿ ಜಿಲ್ಲೆ<br>ಮೊಬೈಲ್ ಸಂಖ್ಯೆ : +91 9480843046<br>ಕಛೇರಿ ದೂರವಾಣಿ:0820 2574892<br>ಇ-ಮೇಲ್:**dswoudupi@gmail.com** |

| ಇ) | **ಉತ್ತರ ಕನ್ನಡ ಜಿಲ್ಲೆ** | ಉಪ ನಿರ್ದೇಶಕರು<br>ಸಮಾಜ ಕಲ್ಯಾಣ ಇಲಾಖೆ<br>ಉತ್ತರ ಕನ್ನಡ ಜಿಲ್ಲೆ<br>ಮೊಬೈಲ್ ಸಂಖ್ಯೆ : +91 9480843047<br>ಕಛೇರಿ ದೂರವಾಣಿ:0838 2226514<br>ಇ-ಮೇಲ್:**dswo.karwar@gmail.com** |
|---|---|---|

9. **ಮೀಸಲಾತಿ:**

ಭಾರತೀಯ ಸೇನೆಗೆ ಸೇರಬಯಸುವ ರಾಜ್ಯದ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಮತ್ತು ತರಬೇತಿಗೆ ಅಭ್ಯರ್ಥಿಗಳನ್ನು ನಿಯೋಜಿಸುವಾಗ ಈ ಕೆಳಗಿನಂತೆ ಸ್ಥಾನ ಹಂಚಿಕೆ ಮಾಡಲಾಗುವುದು.

| ಕ್ರ.ಸಂ | ಮೀಸಲಾತಿ | ಶೇಕಡಾ | ಅರ್ಹರು | ವಿನಾಯಿತಿ |
|---|---|---|---|---|
| 02 | ಹಾಸ್ಟಲ್ ವಿದ್ಯಾರ್ಥಿಗಳು | 10 | ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡದ ನಿರ್ದೇಶಾನಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಪ್ರಿಮೆಟ್ರಿಕ್/ ಪೋಸ್ಟ್ ಮೆಟ್ರಿಕ್/ ಆಶ್ರಮ ಶಾಲೆ ವಸತಿ ಶಾಲೆಯಲ್ಲಿನ ಕನಿಷ್ಠ ಮೂರು ವರ್ಷ ನಿಲಯಾರ್ಥಿಗಳಾಗಿದ್ದ ವಿದ್ಯಾರ್ಥಿಗಳು | ನಿಗದಿತ ಸಂಖ್ಯೆಯಲ್ಲಿ ಹಾಸ್ಟಲ್ ವಿದ್ಯಾರ್ಥಿಗಳು ದೊರೆಯದಿದ್ದರೆ, ಕ್ರೈಸ್ ಅಡಿ ಬರುವ ಯಾವುದಾದರೂ ವಸತಿ ಶಾಲೆಯ ವಿದ್ಯಾರ್ಥಿಗೆ ಅವಕಾಶ ಕಲ್ಪಿಸಬೇಕು. |
| 03 | ವಸತಿ ಶಾಲೆ ವಿದ್ಯಾರ್ಥಿಗಳು | 10 | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಅಲ್ಪ ಸಂಖ್ಯಾತರ ಇಲಾಖೆ ಅಡಿ ಬರುವ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಕನಿಷ್ಠ 05 ವರ್ಷ ವಿದ್ಯಾಭ್ಯಾಸ ಮಾಡಿದ ಅಭ್ಯರ್ಥಿಗಳು. ದೃಢಿಕರಣ ಪತ್ರವನ್ನು ನಿಲಯ ಮೇಲ್ವಿಚಾರಕರು ಮತ್ತು ಪ್ರಾಂಶುಪಾಲರು ನೀಡುವುದು. | ವಸತಿ ಶಾಲೆಯ ವಿದ್ಯಾರ್ಥಿಗಳು ನಿಗದಿತ ಸಂಖ್ಯೆಯ ಗುರಿಗನುಗುಣವಾಗಿ ದೊರೆಯ ದಿದ್ದರೆ, ಹಾಸ್ಟಲ್ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಬೇಕು. ಎರಡೂ ವರ್ಗದಲ್ಲಿ ನಿಗದಿತ ಸಂಖ್ಯೆಯ ಗುರಿಗನುಗುಣವಾಗಿ ಅಭ್ಯರ್ಥಿಗಳು ದೊರೆಯದಿದ್ದರೆ, ಇತರೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಅವಕಾಶವನ್ನು ಕಲ್ಪಿಸುವುದು. |